<u>**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ**</u>
<u>**ಘನ ನ್ಯಾಯಾಲಯದಲ್ಲಿ**</u>

<u>**ಪ್ರಕರಣ ಸಂಖ್ಯೆಃ ಸ್ಪೆಷಲ್ ಕೇಸ್** *127/2022*</u>

**ದಿನಾಂಕಃ** ***11.01.2024***
**(ಸಾಕ್ಷಿಗೆ ಪ್ರಮಾಣ ಮಾಡಿಸಲಾಯಿತು.)**

**ಪ್ರಾ.ಸಾಃ** ***3*** **(ಚಾ.ಸಾ.*10*)**

| | | |
|---|---|---|
| ಹೆಸರು | ಃ | ಬಿ.ಎಂ. ಶಿವಕುಮಾರ |
| ತಂದೆಯ ಹೆಸರು | ಃ | ಎಂ.ಮಲ್ಲಪ್ಪ |
| ವಯಸ್ಸು | ಃ | *51* ವರ್ಷ |
| ಉದ್ಯೋಗ | ಃ | ಎ.ಎಸ್.ಐ. ರಾಮನಗರ ಟೌನ್ ಪೊಲೀಸ್ ಠಾಣೆ |
| ವಾಸ ಸ್ಥಳ | ಃ | **ರಾಮನಗರ** |

<u>**ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಅಭಿಯೋಜಕರಿಂದಃ**</u>

ದಿಃ***25.10.2021*** ರಿಂದ ದಿಃ***24.11.2022*** ರವರೆಗೆ ನಾನು ರಾಮನಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ನಾನು ಕರ್ತವ್ಯ ನಿರ್ವಹಿಸಿರುತ್ತೇನೆ.

***2.*** ದಿಃ***24.05.2022*** ರಂದು ನಾನು ಠಾಣಾಧಿಕಾರಿಯಾಗಿದ್ದಾಗ, ಮಧ್ಯಾಹ್ನ ***02.30*** ಗಂಟೆಗೆ ಚಾಸಾ ***1*** ರವರು ಇಬ್ಬರು ಆರೋಪಿಗಳೊಂದಿಗೆ ಅಮಾನತ್ತು ಪಡಿಸಿಕೊಂಡ ವಸ್ತುಗಳನ್ನು, ಅಮಾನತ್ತು ಮಹಜರ್ ನ್ನು ಹಾಜರು ಪಡಿಸಿ ವರದಿ ಕೊಟ್ಟರು. ಸದರಿ ವರದಿಯ ಆಧಾರದ ಮೇರೆಗೆ ನಮ್ಮ ಠಾಣಾ ಮೊಕದ್ದಮೆ ಸಂ. ***168/22*** ರಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರ.ವ.ವ.ಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಯವರಿಗೆ ಕಳುಹಿಸಿಕೊಟ್ಟೆನು. ಸಾಕ್ಷಿ ಗುರುತಿಸಿದ ವರದಿಯನ್ನು ನಿಪಿ ***3*** ಎಂದು, ಸಾಕ್ಷಿಯ ಸಹಿಯನ್ನು ನಿಪಿ ***3*** (ಎ) ಎಂದು, ಪ್ರ.ವ.ವ. ನಿಪಿ ***4*** ಎಂದು, ಸಾಕ್ಷಿಯ ಸಹಿಯನ್ನು ನಿಪಿ ***4*** (ಎ) ಎಂದು ಗುರುತಿಸಲಾಯಿತು.

***3.*** ಅಮಾನತ್ತು ಪಡಿಸಿಕೊಂಡ ವಸ್ತುಗಳ ಬಗ್ಗೆ ***126/20-22*** ರಲ್ಲಿ ಅಳವಡಿಸಿಕೊಂಡಿದ್ದೇನೆ. ದಸ್ತಗಿರಿ ನಿಯಮಾವಳಿಯನ್ನು ಅನುಸರಿಸಿ ಆರೋಪಿ ***1***

ಮತ್ತು *2* ಇವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ನ್ಯಾಯಾಂಗ ಬಂಧನ ಕುರಿತು ಮಾನ್ಯ ನ್ಯಾಯಾಲಯಕ್ಕೆ ಪಿಸಿ *695,* ಪಿಸಿ *880* ಇವರ ಬೆಂಗಾವಲಿನಲ್ಲಿ ಕಳುಹಿಸಿ ಕೊಟ್ಟಿರುತ್ತೇನೆ.

*4.* ಅದೇ ದಿನ ಚಾಸಾ *6* ಮತ್ತು *7* ಇವರ ಹೇಳಿಕೆ ಪಡೆದುಕೊಂಡಿದ್ದೇನೆ. ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ *1* ನರಸಿಂಹಮೂರ್ತಿ, ಪೊಲೀಸ್ ನಿರೀಕ್ಷಕರು ಇವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ.ಟಿ.ಜಿ. ವಕೀಲರಿಂದಃ**

*5.* ಚಾಸಾ *1* ರವರು ನನ್ನ ಮುಂದೆ ಯಾವುದೇ ವರದಿಯನ್ನು ಹಾಜರು ಪಡಿಸಿಲ್ಲ, ಅದನ್ನು ಸುಳ್ಳು ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಠಾಣೆಯಲ್ಲಿ ಸುಳ್ಳು ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ಮು.ಮಾ.ಗಳನ್ನು ಕೂಡ ಈ ಪ್ರಕರಣಕೋಸ್ಕರ ಸುಳ್ಳು ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ.

*6.* ನನಗೆ ಒರಿಯಾ ಭಾಷೆ ಬರುವುದಿಲ್ಲ ಎಂದರೆ ಸರಿ. ನಮ್ಮ ಮೇಲಾಧಿಕಾರಿಯವರ ಮಾತು ಕೇಳಿ ಸುಳ್ಳು ಕೇಸು ಸೃಷ್ಟಿ ಮಾಡಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

***(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).***

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.

(ನಿಂಗಪ್ಪ ಪರಶುರಾಮ ಕೋಪರ್ಡೆ)
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ರಾಮನಗರ.**

***(ಈ ಹಂತದಲ್ಲಿ ಸದರಿ ಸಾಕ್ಷಿಯು ಅಭಿಯೋಜನ ಪಕ್ಷದ ಪ್ರಕರಣಕ್ಕೆ ಅನುಗುಣವಾಗಿ ಸಾಕ್ಷ್ಯ ನುಡಿಯುತ್ತಿಲ್ಲವಾದ ಕಾರಣ ಆತನನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದರ ಮೇರೆಗೆ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅಭಿಯೋಜಕರ ಪಾಟೀ ಸವಾಲಿಗೆ ಅನುಮತಿ ನೀಡಲಾಗಿದೆ.)***

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದ :**